ಕರ್ನಾಟಕ ವಿಧಾನ ಪರಿಷತ್ತು

1)	ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	1696
2)	ಸದಸ್ಯರ ಹೆಸರು	:	ಶ್ರೀ. ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
3)	ಉತ್ತರಿಸಬೇಕಾದ ದಿನಾಂಕ	:	19.03.2021
4)	ಉತ್ತರಿಸುವವರು	:	ಮಾನ್ಯ ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ	"ಬಾಗಲಕೋಟೆ-ಕುಡುಚಿ" ರೈಲು ಮಾರ್ಗ ನಿರ್ಮಾಣ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ; ಹಾಗೂ ಸದರಿ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು;	ಬಾಗಲಕೋಟೆ -ಕುಡುಚಿ ನಡುವಿನ 30ಕಿ.ಮೀ ವರೆಗಿನ ರೈಲು ಮಾರ್ಗವು ಪೂರ್ಣಗೊಂಡಿದ್ದು, ರೈಲು ಸಂಚಾರವನ್ನು ಆರಂಭಿಸಲಾಗಿದೆ. ಕಜ್ಜಿದೋಣಿಯಿಂದ ಕುಡಚಿವರೆಗಿನ ಭೂಸ್ವಾಧೀನ ಪ್ರಕ್ರಿಯೆಯು ಪ್ರಗತಿಯಲ್ಲಿದ್ದು, ನೈರುತ್ಯ ರೈಲ್ವೆಯಿಂದ ಕಾಮಗಾರಿ ಕೈಗೊಳ್ಳಲಾಗುತ್ತಿದ್ದು, ಕಾಮಗಾರಿಯನ್ನು ಪೂರ್ಣಗೊಳಿಸಲು ಕಾಲಮಿತಿ ನಿಗಧಿ ಪಡಿಸಿರುವುದಿಲ್ಲ.
ಆ	ಸದರಿ ರೈಲು ಮಾರ್ಗದಲ್ಲಿ ಬಾಗಲಕೋಟೆದಿಂದ ಲೋಕಾಪುರದವರೆಗಿನ ಮಾರ್ಗವು ಪೂರ್ಣಗೊಂಡಿರುವುದು ನಿಜವೇ;	ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿದೆ.
ಇ)	ಪೂರ್ಣಗೊಂಡಿದ್ದಲ್ಲಿ, ಮುಂದಿನ ಹಂತವಾದ "ಲೋಕಾಪುರದಿಂದ ಕುಡಚಿ" ವರೆಗಿನ ರೈಲು ಮಾರ್ಗದ ನಿರ್ಮಾಣ ಕಾಮಗಾರಿಯನ್ನು ಇನ್ನೂ ಪ್ರಾರಂಭಿಸದೇ ಇರುವುದಕ್ಕೆ ಕಾರಣಗಳೇನು; ಪ್ರಾರಂಭವಾಗಿದ್ದರೆ ಸದರಿ ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು.	ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿರುವುದರಿಂದ ಪ್ರಸ್ತುತ ಲೋಕಾಪುರ ಗ್ರಾಮದ ಜಮೀನುಗಳ ಭೂಸ್ವಾಧೀನವಾಗುತ್ತಿದ್ದು, ಪುನರ್‌ವಸತಿ ಮತ್ತು ಪುನರ್‌ನಿರ್ಮಾಣ ಕಾಯ್ದೆ 2013ರ ಕಲಂ 11(1) ರ ಅಧಿಸೂಚನೆಗೆ ಅನುಮೋದನೆ ನೀಡಲಾಗಿದೆ.
ಈ)	ಸದರಿ ರೈಲು ಮಾರ್ಗ ನಿರ್ಮಾಣಕ್ಕೆ ಎಷ್ಟು ಎಕರೆ-ಭೂ-ಪ್ರದೇಶದ ಅಗತ್ಯವಿದೆ; ಹಾಗೂ ಸದರಿ ಕಾಮಗಾರಿಗೆ ಎಷ್ಟು ಎಕರೆ ಭೂಮಿಪ್ರದೇಶವನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ ಮತ್ತು ಭೂಸ್ವಾಧೀನ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ.	• ಈ ಯೋಜನೆಗೆ ಒಟ್ಟು 2487.15 ಎಕರೆ ಜಮೀನಿನ ಅಗತ್ಯವಿದೆ. • ಈವರೆಗೂ 1330.15 ಎಕರೆ ಜಮೀನನ್ನು ಭೂಸ್ವಾದೀನ ಪಡಿಕೊಳ್ಳಲಾಗಿದೆ. • ಉಳಿದ 1157 ಎಕರೆ ಭೂಮಿಯ ಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿದೆ.
ಉ)	ಭೂ-ಸ್ವಾಧೀನಕ್ಕೆ ಒಳಪಟ್ಟ ಜಮೀನುಗಳ ರೈತರುಗಳಿಗೆ ನೀಡಿದ ಪರಿಹಾರ ಧನವೆಷ್ಟು (ವಿವರ ನೀಡುವುದು)	ಬಾಗಲಕೋಟೆ -ಕುಡುಚಿ ರೈಲು ಮಾರ್ಗ ಯೋಜನೆಯ ಭೂಸ್ವಾಧೀನಕ್ಕೆ ರಾಜ್ಯ ಸರ್ಕಾರದಿಂದ ಇದುವರೆಗೂ ರೂ. 275.81 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಊ)	"ಬಾಗಲಕೋಟೆ-ಕುಡಚಿ" ರೈಲು ಮಾರ್ಗ ನಿರ್ಮಾಣ ಕಾಮಗಾರಿಗೆ ತಗಲುವ ಸಂಪೂರ್ಣ ವೆಚ್ಚ ಎಷ್ಟು; ಅದರಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಭರಸಬೇಕಾದ ಹಣಕಾಸಿನ ಪ್ರಮಾಣವೆಷ್ಟು? (ಸಂಪೂರ್ಣ ವಿವರ ನೀಡುವುದು)	• ಬಾಗಲಕೋಟೆ-ಕುಡಚಿ ರೈಲು ಮಾರ್ಗ ನಿರ್ಮಾಣ ಕಾಮಗಾರಿಯ ಒಟ್ಟು ಅಂದಾಜು ವೆಚ್ಚ ರೂ.816.14 ಕೋಟಿಗಳಾಗಿದೆ. • ಇದರಲ್ಲಿ ಕೇಂದ್ರ ಸರ್ಕಾರದ ಪಾಲು ರೂ. 408.07 ಕೋಟಿಗಳು. • ರಾಜ್ಯ ಸರ್ಕಾರದ ಪಾಲು ರೂ. 408.07 ಕೋಟಿಗಳಾಗಿದ್ದು, ಈ ಯೋಜನೆಗೆ ಅಗತ್ಯವಿರುವ ಜಮೀನನ್ನು ಭೂಸ್ವಾಧೀನ ಪಡಿಸಿಕೊಂಡು ಉಚಿತವಾಗಿ ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗುತ್ತದೆ. • ಪ್ರಸ್ತುತ ಈ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತ ರೂ. 1525.00 ಕೋಟಿಗಳಿಗೆ ಏರಿಕೆಯಾಗಿದ್ದು, ಪ್ರಸ್ತಾವನೆಯು ರಾಜ್ಯ ಸರ್ಕಾರದ ಪರಿಶೀಲನೆಯಲ್ಲಿದೆ.

ಸಂಖ್ಯೆ: ಮೂಅಇ 65 ರಾರಾಹೆ 2021/ಇ

16/03/2021

(ಆನಂದ್ ಸಿಂಗ್)
ಮೂಲಸೌಲಭ್ಯ ಅಭಿವೃದ್ಧಿ ಹಾಗೂ
ಹಜ್ ಮತ್ತು ವಕ್ಫ್ ಸಚಿವರು